ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: https://kptcl.karnataka.gov.in.
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521**

ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009

**ಸಂಖ್ಯೆ:ಕವಿಪ್ರನಿನಿ/ಬಿ85/36039/2022-23/ಅ** **ದಿನಾಂಕ: 21.10.2022**
**ಲಗತ್ತು:ಒಂದು**

## <u>ಸುತ್ತೋಲೆ</u>

**ವಿಷಯ:** 2022ನೇ ಸಾಲಿನ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ '**ಕೋಟಿಕಂಠ ಗಾಯನ**' ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸರ್ಕಾರ ರವರ ಅ.ಸ.ಪ. ಸಂಖ್ಯೆ: ಕಸಂವಾ 03 ಸಕಾ 2022 ದಿನಾಂಕ:17.10.2022

– – –

2022ನೇ ಸಾಲಿನ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ 'ಕೋಟಿಕಂಠ ಗಾಯನ' ಕಾರ್ಯಕ್ರಮವನ್ನು ಸರ್ಕಾರವು ಆಯೋಜಿಸಿರುತ್ತದೆ. ಉಲ್ಲೇಖಿತ ಪತ್ರವನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಲಯ, ವೃತ್ತ ಮತ್ತು ವಿಭಾಗ ಕಛೇರಿಗಳಲ್ಲಿ ಮತ್ತು ಕಾವೇರಿ ಭವನದಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ:

1. ದಿನಾಂಕ:28.10.2022 ರ ಬೆಳಿಗ್ಗೆ 11.00 ಗಂಟೆಗೆ ತಮ್ಮ ಕಚೇರಿಯ ಆವರಣದಲ್ಲಿ ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುವ ಆರು ಹಾಡುಗಳ ಸಮೂಹ ಗೀತ ಗಾಯನವನ್ನು ಎಲ್ಲಾ ಸಿಬ್ಬಂದಿ ಹಾಡುವುದರೊಂದಿಗೆ ಯಶಸ್ವಿಯಾಗಿ ಆಯೋಜಿಸುವುದು.
2. ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಎಲ್ಲಾ ಸಿಬ್ಬಂದಿ ಕೋಟಿ ಕಂಠ ಗೀತ ಗಾಯನದ ನೋಂದಣಿ ಅಭಿಯಾನದಲ್ಲಿ ನೋಂದಣಿ ಮಾಡುವುದು.

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.,)**
**ಕವಿಪ್ರನಿನಿ**

1. ಎಲ್ಲಾ ಮುಖ್ಯ ಇಂಜಿನಿಯರ್(ವಿ)/ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
2. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/(ಪ್ರಸರಣ)/ (ಆ. ಮತ್ತು ಮಾ.ಸಂ)/ ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in → eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ ನಿಯಂತ್ರಣಾಧಿಕಾರಿ, ಕವಿಪ್ರನಿನಿ.
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
3. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ), ಕವಿಪ್ರನಿನಿ,
4. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು,

**<u>ಪ್ರತಿಗಳು ಮಾಹಿತಿಗಾಗಿ:</u>**

1. ಶ್ರೀ.ಆರ್.ಹೆಚ್. ಲಕ್ಷ್ಮೀ ಪತಿ, ಅಧ್ಯಕ್ಷರು, ಕವಿಪ್ರನಿ.ನೌ.ಸಂಘ(ನೋ.ಸಂ.659)& ನಿರ್ದೇಶಕರು ಕವಿಪ್ರನಿನಿ & ವಿಸಕಂಗಳು.
2. ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ನಿರ್ದೇಶಕರು ಕವಿಪ್ರನಿನಿ & ವಿಸಕಂಗಳು
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಘ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಕೆ.ಆರ್.ವೃತ್ತ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ವಿಸಕಂಗಳು/, ಪ.ಜಾ/ಪ.ಪಂ. ಅಧಿಕಾರಿಗಳ, ಸಂಘ, ಬೆಂಗಳೂರು.

ಡಾ|| ಎನ್. ಮಂಜುಳ, ಭಾ.ಆ.ಸೇ.,
ಸರ್ಕಾರದ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಕರ್ನಾಟಕ ಸರ್ಕಾರ

75 ಸ್ವಾತಂತ್ರ್ಯದ ಅಮೃತ ಮಹೋತ್ಸವ

ಕರ್ನಾಟಕ ಸರ್ಕಾರದ ಸಚಿವಾಲಯ,
ಕೊಠಡಿ ಸಂಖ್ಯೆ: 2, ನೆಲಮಹಡಿ,
ವಿಕಾಸ ಸೌಧ, ಬೆಂಗಳೂರು–560 001
ದೂರವಾಣಿ : 080–22205781/080–22034002
ಇ–ಮೇಲ್: secy-kc@karnataka.gov.in

ಅ.ಸ.ಪ. ಸಂಖ್ಯೆ: ಕಸಂವಾ 03 ಸಕಾ 2022 ದಿನಾಂಕ: 17.10.2022

ಮಾನ್ಯರೆ,

ವಿಷಯ: 2022ನೇ ಸಾಲಿನ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ '**ಕೋಟಿಕಂಠ ಗಾಯನ**' ಕಾರ್ಯಕ್ರಮ ಆಯೋಜಿಸುವ ಬಗ್ಗೆ.

******

ನಾಡು-ನುಡಿಯ ಬಗ್ಗೆ ಅಭಿಮಾನ ಮೂಡಿಸುವ, ನಮ್ಮ ಪರಂಪರೆಯ ಬಗ್ಗೆ ಹೆಮ್ಮೆ ಮೂಡಿಸುವ ಗೀತೆ ಕವಿಗಳನ್ನು ನಾಡಿನ ಹೆಮ್ಮೆಯ ಕವಿಗಳು ರಚಿಸಿದ್ದು, ಇವುಗಳ ಕೇಳುವಿಕೆಯು ನಮ್ಮಲ್ಲಿ ಅಭಿಮಾನವನ್ನು ಮೂಡಿಸುತ್ತದೆ. ಈ ದೃಷ್ಟಿಯಿಂದ ಈ ಗೀತೆಗಳು "ಕನ್ನಡದ ಶಕ್ತಿ". ಕಳೆದ ರಾಜ್ಯೋತ್ಸವದ ಸಂದರ್ಭದಲ್ಲಿ ಪ್ರಾತಿನಿಧಿಕವಾಗಿ ಆಯ್ದ 3 ಕನ್ನಡ ಗೀತೆಗಳ ಸಮೂಹಗಾಯನವನ್ನು ವಿನೂತನವಾಗಿ 'ಲಕ್ಷಕಂಠ ಗೀತಗಾಯನ' ಶೀರ್ಷಿಕೆಯಡಿ ರಾಜ್ಯಾದ್ಯಂತ ಆಯೋಜಿಸಿ ಯಶಸ್ವಿಗೊಳಿಸಿದ ನಿಟ್ಟಿನಲ್ಲಿ, ಈ ವರ್ಷವೂ ಅಕ್ಟೋಬರ್ 28 ರಂದು **'ಕೋಟಿಕಂಠ ಗೀತಗಾಯನ'** ಕಾರ್ಯಕ್ರಮವನ್ನು ಸರ್ಕಾರದ ವತಿಯಿಂದ ಆಯೋಜಿಸಲಾಗುತ್ತಿದ್ದು, ಈ ವಿಶೇಷ ಕಾರ್ಯಕ್ರಮದಲ್ಲಿ ಒಂದು ಕೋಟಿ ಜನರನ್ನು ಭಾಗಿಯಾಗಿಸಲು ಉದ್ದೇಶಿಸಲಾಗಿದೆ. ಕಾರ್ಯಕ್ರಮದ ವಿವರಗಳು ಕೆಳಕಂಡಂತಿದೆ:-

1. **'ನನ್ನ ನಾಡು – ನನ್ನ ಹಾಡು' ಸಮೂಹ ಗೀತಗಾಯನ** - ಅಕ್ಟೋಬರ್ 28 ರಂದು ಶುಕ್ರವಾರ ಕನ್ನಡ ನಾಡು-ನುಡಿಯ ಶ್ರೇಷ್ಠತೆಯನ್ನು ಸಾರುವ
   ಅ) ನಾಡಗೀತೆ
   ಆ) ಹುಯಿಲಗೋಳ ನಾರಾಯಣರಾಯರ 'ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು'
   ಇ) ರಾಷ್ಟ್ರಕವಿ ಕುವೆಂಪುರವರ 'ಬಾರಿಸು ಕನ್ನಡ ಡಿಂಡಿಮವ'
   ಈ) ಡಾ. ಡಿ.ಎಸ್. ಕರ್ಕಿಯವರ 'ಹಚ್ಚೇವು ಕನ್ನಡದ ದೀಪ'
   ಉ) ನಾಡೋಜ ಡಾ. ಚೆನ್ನವೀರ ಕಣವಿಯವರ 'ವಿಶ್ವವಿನೂತನ ವಿದ್ಯಾಚೇತನ'
   ಊ) ಡಾ. ಹಂಸಲೇಖರವರ 'ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು'

   ಈ ಗೀತೆಗಳನ್ನು ಬೆಳಗ್ಗೆ: 11.00 ಗಂಟೆಗೆ ಏಕಕಾಲದಲ್ಲಿ ಹಾಡುವುದು. ನಂತರ ಕನ್ನಡ ನಾಡು-ನುಡಿಯ ಹಿರಿಮೆಯನ್ನು ಸಾರುವ ಕನ್ನಡ ಗೀತೆಗಳ ಗಾಯನವನ್ನು ಸಂದರ್ಭಾನುಸಾರ ಮುಂದುವರಿಸಬಹುದಾಗಿದೆ. ಕಾರ್ಯಕ್ರಮದ ಸ್ಥೂಲ ರೂಪು-ರೇಷೆಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. ಹಾಡುಗಳ ಸಾಹಿತ್ಯ ಹಾಗೂ ಧಾಟಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯುಟ್ಯೂಬ್ ಚಾನೆಲ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು.
   (https://youtube.com/playlist?list=PLBCy399y7VQooCmZjzZQfJUC7L99JI02N)

2. **ಕೋಟಿ ಕಂಠ ಗೀತಗಾಯನಕ್ಕೆ ನೋಂದಣಿ:-** ಕಾರ್ಯಕ್ರಮದಲ್ಲಿ ಭಾಗವಹಿಸುವವರನ್ನು ನೋಂದಾಯಿಸಿ, ಭಾಗವಹಿಸಿದವರಿಗೆ ಸ್ವಯಂಚಾಲಿತ ಆನ್‌ಲೈನ್ ಪ್ರಮಾಣಪತ್ರ ನೀಡಲು ಉದ್ದೇಶಿಸಿದೆ. ಅದರ ಅಂಗವಾಗಿ ಅಕ್ಟೋಬರ್ 11 ರಿಂದ 28 ರವರೆಗೆ ನೋಂದಣಿ ಅಭಿಯಾನ ಮಾಡಲು ಯೋಜಿಸಲಾಗಿದ್ದು, ಆನ್‌ಲೈನ್ ನೋಂದಾವಣೆಗಾಗಿ ಲಿಂಕ್ https://kannadasiri.karnataka.gov. in/kkg/public/ ಆಗಿರುತ್ತದೆ. ತಮ್ಮ ಇಲಾಖಾ ವ್ಯಾಪ್ತಿಯ ಎಲ್ಲಾ ಹಂತದ ಅಧಿಕಾರಿ/ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ನೋಂದಾಯಿಸಿಕೊಂಡು ಭಾಗವಹಿಸಲು ಸೂಚನೆಗಳನ್ನು ನೀಡುವುದು. (ನೋಂದಣಿ ವಿಧಾನ ಹಾಗೂ ಛಾಯಾಚಿತ್ರ ಅಪ್ ಲೋಡ್ ಮಾಡುವ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯುಟ್ಯೂಬ್ ಚಾನೆಲ್ ನಲ್ಲಿ ವಿಡಿಯೋ ಅಪ್ ಲೋಡ್ ಮಾಡಲಾಗುವುದು)

.....2

2



ಮೇಲಿನ ಉದ್ದೇಶಿತ ಕಾರ್ಯಕ್ರಮದಲ್ಲಿ ತಮ್ಮ ಇಲಾಖೆಯ ವ್ಯಾಪ್ತಿಯಡಿ ಬರುವ ಜಿಲ್ಲಾ ಹಂತದ ಅಧಿಕಾರಿ / ಸಿಬ್ಬಂದಿಗಳು ನೋಂದಾಯಿಸಿಕೊಂಡು ಭಾಗವಹಿಸಿ ಕಾರ್ಯಕ್ರಮ ಮುಗಿದ ನಂತರ ಛಾಯಾಚಿತ್ರ ಅಪ್‌ಲೋಡ್ ಮಾಡುವಂತೆ ಹಾಗೂ ಕಾರ್ಯಕ್ರಮ ಆಯೋಜಿಸಲು ಸೂಕ್ತ ನಿರ್ದೇಶನ ನೀಡಿ, ಕಾರ್ಯಕ್ರಮದ ಬಗ್ಗೆ ಪ್ರಚುರಪಡಿಸಿ ಕನ್ನಡದ ಈ ಅಭಿಯಾನವನ್ನು ಯಶಸ್ವಿಗೊಳಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

**ಶ್ರೀ ಜಿ. ಕುಮಾರ ನಾಯಕ್ ಭಾ.ಆ.ಸೇ.,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಇಂಧನ ಇಲಾಖೆ,
ವಿಕಾಸಸೌಧ, ಬೆಂಗಳೂರು.